## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕೋವಿಡ್-19ರ ಸಲುವಾಗಿ ಪಿ.ಪಿ.ಇ. ಕಿಟ್ ಧರಿಸಿ ಕಾರ್ಯ ನಿರ್ವಹಿಸುತ್ತಿರುವ ಶುಶ್ರೂಷಕರಿಗೆ ಪ್ರೋತ್ಸಾಹಧನವನ್ನು ನೀಡುವ ಬಗ್ಗೆ.

ಓದಲಾಗಿದೆ:- ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 104 ಆರ್ಐ 2020, ದಿನಾಂಕ:27/08/2020

*****

**ಪ್ರಸ್ತಾವನೆ:**

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಕೋವಿಡ್ ಹೆಲ್ತ್ ಸೆಂಟರ್, ಕೋವಿಡ್ ಆಸ್ಪತ್ರೆ ಹಾಗೂ ಕೋವಿಡ್ ಕೇರ್ ಸೆಂಟರ್‌ಗಳಲ್ಲಿ ಕೋವಿಡ್-19 (ಕೊರೋನಾ ವೈರಸ್)ನ್ನು ನಿಯಂತ್ರಿಸುವ ಸಲುವಾಗಿ ಪಿಪಿಇ ಕಿಟ್ ಧರಿಸಿ (The nurses who are working in COVID ward wearing PPE) ಗುತ್ತಿಗೆ/ಹೊರಗುತ್ತಿಗೆ ಹಾಗೂ ಸ್ವಯಂಪ್ರೇರಿತ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಶುಶ್ರೂಷಕರುಗಳಿಗೆ ಮಾತ್ರ ಕರ್ತವ್ಯದ ಒಂದು ಭಾಗವಾಗಿ ರೂ.5,000/- (ಐದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ತಾತ್ಕಾಲಿಕವಾಗಿ ಕೋವಿಡ್ ರಿಸ್ಕ್ ಪ್ರೋತ್ಸಾಹಧನವನ್ನು (COVID Risk Incentive) ನೀಡಲು ಮಂಜೂರಾತಿ ನೀಡಲಾಗಿರುತ್ತದೆ.

ಅದೇ ರೀತಿಯಾಗಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿಯಲ್ಲಿ ಬರುವ ಆಸ್ಪತ್ರೆಗಳಲ್ಲಿನ ಕೋವಿಡ್ ಹೆಲ್ತ್ ಸೆಂಟರ್, ಕೋವಿಡ್ ಆಸ್ಪತ್ರೆ ಮತ್ತು ಕೋವಿಡ್ ಕೇರ್ ಸೆಂಟರ್‌ಗಳಲ್ಲಿ ಕೋವಿಡ್-19 (ಕೊರೋನಾ ವೈರಸ್)ನ್ನು ನಿಯಂತ್ರಿಸುವ ಸಲುವಾಗಿ ಪಿ.ಪಿ.ಇ. ಕಿಟ್ ಧರಿಸಿ (The Nurses who are working in COVID-19 ward wearing PPE) ಖಾಯಂ / ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಶುಶ್ರೂಷಕರುಗಳಿಗೆ ಉತ್ತೇಜನ ನೀಡುವ ಸಲುವಾಗಿ ಮಾಸಿಕ ರೂ.5,000/- (ಐದು ಸಾವಿರ ರೂಪಾಯಿಗಳು ಮಾತ್ರ)ಗಳ ಕೋವಿಡ್ ರಿಸ್ಕ್ ಪ್ರೋತ್ಸಾಹಧನವನ್ನು (COVID Risk Incentive) ತಾತ್ಕಾಲಿಕವಾಗಿ 06 ತಿಂಗಳ ಅವಧಿಗೆ ನೀಡಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 200 ಹೆಚ್ಎಸ್ಎಂ 2020**

**ಬೆಂಗಳೂರು, ದಿನಾಂಕ: 24-09-2020**

CAO
CAO-FA
25/9
Guard file

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿಯಲ್ಲಿ ಬರುವ ಆಸ್ಪತ್ರೆಗಳಲ್ಲಿನ ಕೋವಿಡ್ ಹೆಲ್ತ್ ಸೆಂಟರ್, ಕೋವಿಡ್ ಆಸ್ಪತ್ರೆ ಮತ್ತು ಕೋವಿಡ್ ಕೇರ್ ಸೆಂಟರ್‌ಗಳಲ್ಲಿ ಕೋವಿಡ್-19 (ಕೊರೋನಾ ವೈರಸ್)ನ್ನು ನಿಯಂತ್ರಿಸುವ ಸಲುವಾಗಿ ಪಿ.ಪಿ.ಇ. ಕಿಟ್ ಧರಿಸಿ (The Nurses who are working in COVID-19 ward wearing PPE) ಖಾಯಂ / ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಶುಶ್ರೂಷಕರುಗಳಿಗೆ ಉತ್ತೇಜನ ನೀಡುವ ಸಲುವಾಗಿ ಮಾಸಿಕ ರೂ.5,000/- (ಐದು ಸಾವಿರ ರೂಪಾಯಿಗಳು ಮಾತ್ರ)ಗಳ ಕೋವಿಡ್ ರಿಸ್ಕ್ ಪ್ರೋತ್ಸಾಹಧನವನ್ನು (COVID Risk Incentive) ತಾತ್ಕಾಲಿಕವಾಗಿ 06 ತಿಂಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಭವಿಷ್ಯಾವರ್ತಿಯಾಗಿ ನೀಡಲು ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 385 ವೆಚ್ಚ-5 2020, ದಿನಾಂಕ: 11/09/2020 ರಂದು ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಯ. ಶಿವಶಂಕರ್) 23/9/2020
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಸೇವೆಗಳು)

**ಇವರಿಗೆ:**

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು (ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಮುಖಾಂತರ)
4. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು (ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಮುಖಾಂತರ)
5. ರಾಜ್ಯದ ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು/ಜಿಲ್ಲಾ ಶಸ್ತ್ರ ಚಿಕಿತ್ಸಕರುಗಳು (ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಮುಖಾಂತರ)
6. ಮುಖ್ಯ ಆಡಳಿತಾಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
8. ವಿಶೇಷಾಧಿಕಾರಿ ಮತ್ತು ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಜಿ.ಪಂ) (ವೆಚ್ಚ-5), ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಆ.ಕು.ಕ. ಇಲಾಖೆ, ವಿಕಾಸ ಸೌಧ., ಬೆಂಗಳೂರು
2. ಸರ್ಕಾರದ ಜಂಟಿ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕು.ಕ. ಇಲಾಖೆ, ವಿಕಾಸ ಸೌಧ, ಬೆಂಗಳೂರು.